ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ದಿಃ **07-09-2021**

**PW-1**

ಮುಂದುವರಿದ ಮುಖ್ಯ ವಿಚಾರಣೆಃ ಶ್ರೀ ಐ ಆರ್ ಬಿ ವಕೀಲರಿಂದಃ

ವಾದಿಯ ಜಿಪಿಎ ಆದ ಸುದರ್ಶನ್ ಬಿನ್ ಸದಾನಂದ ಸಫಲಿಗ ಹಾಜರಿರುತ್ತೇನೆ. ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದನ್ನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ. ಪ್ರಮಾಣ ಪತ್ರದಲ್ಲಿ ಬರೆಸಿರುವ ಎಲ್ಲಾ ವಿಷಯಗಳು ಸತ್ಯ ಮತ್ತು ಸರಿ ಇದ್ದು, ಅವುಗಳನ್ನು ಓದಿ ತಿಳಿದುಕೊಂಡು ಸರಿ ಇದೆ ಎಂದು ತಿಳಿದು ಸಹಿ ಮಾಡಿರುತ್ತೇನೆ ಎಂದು ಪ್ರಮಾಣೀಕರಿಸಿರುತ್ತಾರೆ. ಪಿಡಬ್ಲ್ಯೂ-1 ಎಂದು ವಿಚಾರಿಸಲಾಯಿತು.

2. ಸಾಕ್ಷಿಯು ಜಿಪಿಎ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು, ಕೃಷಿ ಸ್ಥಿರಾಸ್ತಿಯ ವ್ಯವಸ್ಥಾಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು, ಸ.ನಂಃ 34/7 ರ ಮುಡೂರು ಗ್ರಾಮದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, ಸ.ನಂಃ 34/7 ರ ಎಫ್ ಎಮ್ ಬಿ ನಕ್ಷೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ದಾವಾ ಆಸ್ತಿಗೆ ಸಂಬಂಧಿಸಿದ ಮೂರು ಭಾವಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಪ್ರತಿವಾದಿ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ-5 ರಿಂದ 7 ಎಂದು, ಸ.ನಂಃ 34-1 ಎ 1 ರ ದರ್ಖಾಸ್ತು ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರಃ ಶ್ರೀ ಎಸ್ ಕೆ ಎನ್ ವಕೀಲರು ಸಮಯವನ್ನು ಕೋರಿದ್ದು, ಕೋರಿಕೆಯ ಮೇರೆಗೆ ಸಮಯಾವಕಾಶ ನೀಡಲಾಯಿತು.

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಎ.ಹೆ.ಸಿ.ನ್ಯಾ. ಮತ್ತು ಪ್ರ.ದ.ನ್ಯಾ.ದಂ., ಕಾರ್ಕಳ

PW.1 present and filed chief affidavit in lieu of his examination chief. Same is accepted and examined as PW1 and got marked Ex.P1 to 8. For cross of Pw 1.

Call on: 11-10-2021.

II Addl. Civil Judge & JMFC.
Karkala